ದಿನಾಂಕ: 12.01.2022 ರಂದು ಬೆಳಗ್ಗೆ 11.00 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿಗಳು ಹಾಗೂ ಸದಸ್ಯರು
2. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀಮತಿ ರೂಪಶ್ರೀ, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ಶೇಖರ್ ನಾಯಕ್, ಎ.ಇ, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ ಕೆ. ಉಮಾಶಂಕರ್, ಶಾರದಾ ಕಾಲೋನಿ ಸದಸ್ಯರು
6. ಶ್ರೀ ಎಂ. ರವೀಂದ್ರ, ಸದಸ್ಯರು
7. ಶ್ರೀ ರಮೇಶ್, ಸದಸ್ಯರು.

ದಿನಾಂಕ: 18.12.2021 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 12.01.2022 ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. ಆಫೀಸರ್ಸ್ ಸಮುದಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ, ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಶ್ರೀರಾಮನಗರ, ಮೀನಾಕ್ಷಿನಗರ, ಗಾಡಿಮುದ್ದಣ್ಣ ರಸ್ತೆ, ಮತ್ತು ಶಾರದಾಕಾಲೋನಿ ವ್ಯಾಪ್ತಿಯಲ್ಲಿ ಬರುವ ರಸ್ತೆ ಕತ್ತರಿಸಿರುವ ಭಾಗವನ್ನು ಸರಿಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಗಿರುತದೆ. ಇದನ್ನು ಹಂತಹಂತವಾಗಿ ಹೆಚ್.ಎಂ.ಪಿ. ಟ್ರಾಫಿಸೆಲ್, ಸಂಚಾರಿ ಕೋಶ, ಕೇಂದ್ರ ಕಛೇರಿಯಿಂದ ಮಿಶ್ರಣವನ್ನು ತರಿಸಿಕೊಂಡು ಹಂತ ಹಂತವಾಗಿ ಮುಚ್ಚಲಾಗುವುದು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

2. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಕಂದಾಯ ಪರಿವೀಕ್ಷಕರಿಗೆ ವಾರ್ಡಿನಲ್ಲಿ ಬಾಕಿ ಇರುವ ಕಂದಾಯ ವಸೂಲಾತಿಯನ್ನು ಸಮರ್ಪಕವಾಗಿ ವಸೂಲಿ ಮಾಡಿ ಬಿ.ಬಿ.ಎಂ.ಪಿ.ಯ ತೆರಿಗೆಯನ್ನು ಹೆಚ್ಚಿಸಬೇಕೆಂದು ತಿಳಿಸಿದರು.

3. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಬ್ಲಾಕ್ ಸ್ಪಾಟ್‌ಗಳಲ್ಲಿ ಕಸವನ್ನು ಹಾಕದಂತೆ ಮತ್ತು ಕಸವನ್ನು ರಸ್ತೆಯಲ್ಲಿ ಹಾಕದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ಮಾರ್ಷಲ್ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. ಕ್ರಮ ವಹಿಸಬೇಕೆಂದು ಸಭೆಗೆ ತಿಳಿಸಿದರು.

4. ವಾರ್ಡ್ ನಂ. 101ರ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಚರಂಡಿಗಳನ್ನು ತೆರವುಗೊಳಿಸುವಂತೆ ಸೂಚಿಸಿದರು. ಇದಕ್ಕೆ ಉತ್ತರವಾಗಿ ವಾರ್ಡಿನ ಸಹಾಯಕ ಅಭಿಯಂತರರು ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ತಿಳಿಸಿದರು.

5. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಬಿದ್ದಿರುವುದರಿಂದ ತುರ್ತಾಗಿ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು, ಬಿ.ಬಿ.ಎಂ.ಪಿ. ರವರು ರಸ್ತೆಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳುವುದಾಗಿ ಹಾಗೂ ನೋಡಲ್ ಅಧಿಕಾರಿಗಳ ಸಮ್ಮುಖದಲ್ಲಿ ಚರ್ಚಿಸಿದಂತೆ, ಕಾರ್ಯಪಾಲಕ ಅಭಿಯಂತರರು (ರಾಜಾಜಿನಗರ) ರವರು ದೂರವಾಣಿ ಮುಖಾಂತರ ಸಹ ಚರ್ಚಿಸಲಾಗಿರುತ್ತದೆ.

Scanned by CamScanner

6. ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19ರ ಓಮಿಕ್ರಾನ್ ವಿಸ್ತಾರಗೊಳ್ಳುತ್ತಿದ್ದು, ಅದಕ್ಕೆ ಪ್ರತಿ ನಿತ್ಯ ಸೂಕ್ತ ಪ್ರಮಾಣದಲ್ಲಿ 2ನೇ ಡೋಸ್ ಲಸಿಕೆ ತೆಗೆದುಕೊಂಡು 9 ತಿಂಗಳ ನಂತರ ಬೂಸ್ಟರ್ ಡೋಸ್ ಅನ್ನು ಬೃಹತ್ ಪ್ರಮಾಣದಲ್ಲಿ ವಿತರಣೆ ಮಾಡಲಾಗುತ್ತದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

13/1/2022

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

Scanned by CamScanner